# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1004 |
| ಮಾನ್ಯ ಸದಸ್ಯರ ಹೆಸರು | ಡಾ|| ಎಂ. ಜಿ. ಮುಳೆ<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14/03/2025 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರ್ಮಿಕ ಕಲ್ಯಾಣಕ್ಕಾಗಿ ಯಾವ ಯಾವ ಯೋಜನೆಗಳು ಜಾರಿಯಾಗಿವೆ (ವಿವರ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಕಾರ್ಮಿಕ ಕಲ್ಯಾಣಕ್ಕಾಗಿ ಜಾರಿಗೊಳಿಸಲಾಗಿರುವ ಯೋಜನೆಗಳ ವಿವರವನ್ನು ಈ ಕೆಳಕಂಡಂತೆ ಒದಗಿಸಿದೆ.<br><br>**ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ :**<br>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಹಾಗೂ ಅವರ ಅವಲಂಬಿತರಿಗಾಗಿ ರೂಪಿಸಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ-01** ರಲ್ಲಿ ಒದಗಿಸಿದೆ.<br><br>**ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:**<br>ಈ ಮಂಡಳಿಯು ಅಸಂಘಟಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಒದಗಿಸಲು ಕೆಳಕಂಡ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು ಸೌಲಭ್ಯಗಳ ವಿವರ ಈ ಕೆಳಗಿನಂತಿವೆ.<br><br>(1) **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ :-**<br>ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳಿಗೆ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |

| | | |
|---|---|---|
| | | **(ಅ)ಅಪಘಾತ ಪರಿಹಾರ:** ಅಪಘಾತದಿಂದ ಮೃತರಾದ ಪ್ರಕರಣಗಳಲ್ಲಿ ಅವರ ನಾಮನಿರ್ದೇಶಿತರಿಗೆ ರೂ. 5 ಲಕ್ಷಗಳ ಪರಿಹಾರ, ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಪ್ರಕರಣಗಳಲ್ಲಿ ಫಲಾನುಭವಿಗೆ ರೂ.2 ಲಕ್ಷಗಳವರೆಗೆ ಪರಿಹಾರ ಮತ್ತು ಒಳರೋಗಿಯಾಗಿ ಚಿಕಿತ್ಸೆ ಪಡೆದಲ್ಲಿ ರೂ.1 ಲಕ್ಷದವರೆಗೆ ಚಿಕಿತ್ಸಾ ವೆಚ್ಚ ಮರುಪಾವತಿ ಮಾಡಲಾಗುತ್ತಿದೆ.<br><br>**(ಆ) ಶೈಕ್ಷಣಿಕ ಧನ ಸಹಾಯ:** ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಗಳ ಗರಿಷ್ಠ ಇಬ್ಬರು ಮಕ್ಕಳಿಗೆ ಒಂದನೇ ತರಗತಿಯಿಂದ ಪದವಿಪೂರ್ವ ತರಗತಿಯ ವರೆಗೆ ವ್ಯಾಸಂಗ ಮಾಡಲು ವಾರ್ಷಿಕ ತಲಾ ರೂ.10,000/-ರಂತೆ ಶೈಕ್ಷಣಿಕ ಸಹಾಯ ಧನ ವಿತರಿಸಲಾಗುತ್ತಿದೆ.<br><br>**(2) ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ:-**<br>ಈಗಾಗಲೇ ಜಾರಿಯಲ್ಲಿದ್ದ, ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆಯನ್ನು ಪರಿಷ್ಕರಿಸಲಾಗಿದ್ದು, ಈ ಯೋಜನೆಯಡಿ ಅಸಂಘಟಿತ ವರ್ಗಗಳಾದ " ಕ್ಷೌರಿಕರು, ಗೃಹ ಕಾರ್ಮಿಕರು, ಅಕ್ಕಸಾಲಿಗರು, ಹಮಾಲರು, ಕಮ್ಮಾರರು, ಚಿಂದಿ ಆಯುವವರು, ಟೈಲರ್ಸ್, ಮಂಡಕ್ಕಿ ಭಟ್ಟಿ ಕಾರ್ಮಿಕರು ಸೇರಿದಂತೆ ಒಟ್ಟಾರೆ 91 ವರ್ಗಗಳ ಕಾರ್ಮಿಕರನ್ನು ಯೋಜನೆಯಡಿ ನೋಂದಾಯಿಸಿ ಗುರುತಿನ ಚೀಟಿ ವಿತರಿಸಲಾಗುತ್ತಿದ್ದು, ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>**(ಅ) ಅಪಘಾತ ಪರಿಹಾರ ಸೌಲಭ್ಯ:**<br><br>1. ಮರಣ ಪ್ರಕರಣ _ ರೂ. 1.00 ಲಕ್ಷದವರೆಗೆ ಅಪಘಾತ ಪರಿಹಾರ .<br>2. ಅಪಘಾತದಿಂದುಟಾಗುವ ಸಂಪೂರ್ಣ ಶಾಶ್ವತ/ ಭಾಗಶಃ ದುರ್ಬಲತೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) - ರೂ. 1.00 ಲಕ್ಷದವರೆಗೆ ಪರಿಹಾರ.<br>3. ಆಸ್ಪತ್ರೆ ವೆಚ್ಚ ಮರುಪಾವತಿ - ರೂ. 50,000/- ದವರೆಗೆ. |

**(ಆ) ಸಹಜ ಮರಣ ಪರಿಹಾರ (ಅಂತ್ಯಕ್ರಿಯೆ ಧನಸಹಾಯ)**

ನೋಂದಾಯಿತ ಫಲಾನುಭವಿಯು ವಯೋಸಹಜ/ ಖಾಯಿಲೆ/ ಅಕಾಲಿಕ ಅಥವಾ ಇನ್ನಿತರೆ ಕಾರಣಗಳಿಂದ ಮರಣ ಹೊಂದಿದಲ್ಲಿ ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ ರೂ. 10,000/-ಗಳ ಧನ ಸಹಾಯ ಸೌಲಭ್ಯ.

**(3) ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ:-**

ಈ ಯೋಜನೆಯಡಿ ನೋಂದಾಯಿತ ಪ್ಲಾಟ್ ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರಿಗೆ ಅಪಘಾತದಿಂದ ಮರಣ ಹೊಂದಿದಲ್ಲಿ ರೂ. 2.00 ಲಕ್ಷಗಳ ಅಪಘಾತ ಪರಿಹಾರ ಹಾಗೂ ರೂ. 2.00 ಲಕ್ಷಗಳ ವಿಮಾ ಸೇರಿ ಒಟ್ಟು ರೂ.4.00 ಲಕ್ಷಗಳ ಪರಿಹಾರ ಒದಗಿಸಲಾಗುತ್ತಿದೆ. ಅಲ್ಲದೇ, ಅಪಘಾತದ ಕಾರಣ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ ಮತ್ತು ರೂ.1.00 ಲಕ್ಷದ ವರೆಗೆ ಆಸ್ಪತ್ರೆ ವೆಚ್ಚ ಮರುಪಾವತಿ ಮಾಡಲಾಗುತ್ತದೆ.

**(4) ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:-**

ಈ ಯೋಜನೆಯಡಿ ಇ-ಶ್ರಮ್ ಪೋರ್ಟಲ್ ನಲ್ಲಿ News Paper Boy ಎಂಬ ವರ್ಗದಡಿ ನೋಂದಾಯಿತ ದಿನಪತ್ರಿಕೆ ವಿತರಿಸುವ ಕಾರ್ಮಿಕರಿಗೆ ಅಪಘಾತದಿಂದ ಮರಣ ಹೊಂದಿದಲ್ಲಿ ರೂ.2.00 ಲಕ್ಷಗಳವರಗೆ, ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ) ಹಾಗೂ ಅಪಘಾತ/ ಮಾರಣಾಂತಿಕ ಕಾಯಿಲೆ/ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷದ ಸೌಲಭ್ಯವನ್ನು ಒದಗಿಸಲಾಗುತ್ತಿದೆ ಹಾಗೂ ಸಹಜ ಮರಣ ಪ್ರಕರಣಗಳಲ್ಲಿ ರೂ. 10,000/- ಧನ ಸಹಾಯ ಒದಗಿಸಲಾಗುತ್ತಿದೆ.

**(5) ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ:-**

ಅಸಂಘಟಿತ ವರ್ಗದ ಕಾರ್ಮಿಕರಲ್ಲಿ ಖಾಸಗಿ ವಾಣಿಜ್ಯ ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ ಸೌಲಭ್ಯಗಳನ್ನು ಒದಗಿಸಲು ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಣದ ಉದ್ದೇಶದಿಂದ, ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024ನ್ನು ಅಧಿಸೂಚಿಸಲಾಗಿದ್ದು, ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಪ್ರತ್ಯೇಕವಾಗಿ, "ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ"ಯನ್ನು ರಚಿಸಲಾಗಿರುತ್ತದೆ. ಈ ಕಾಯ್ದೆಯಡಿ ಸಂಗ್ರಹವಾಗಬಹುದಾದ ಅನುದಾನದಿಂದ ಅರ್ಹ ಕಾರ್ಮಿಕರಿಗೆ ಈ ಕೆಳಕಂಡ ಸೌಲಭ್ಯಗಳನ್ನು ಒದಗಿಸಲು ಪ್ರಸ್ತಾಪಿಸಲಾಗಿದೆ.

**(ಅ) ಅಪಘಾತ ಪರಿಹಾರ ಸೌಲಭ್ಯ:**

- ಅಪಘಾತದಿಂದ ಫಲಾನುಭವಿಗಳು ನಿಧನರಾದಲ್ಲಿ, ನಾಮ ನಿರ್ದೇಶಿತರಿಗೆ ರೂ.5 ಲಕ್ಷಗಳ ಪರಿಹಾರ.
- ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2 ಲಕ್ಷಗಳ ವರೆಗೆ ಪರಿಹಾರ.
- ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ- ಆಸ್ಪತ್ರೆ ವೆಚ್ಚ ಮರುಪಾವತಿ ರೂ. 1.00 ಲಕ್ಷದವರೆಗೆ.

**(ಆ) ನೈಸರ್ಗಿಕ ಮರಣ ಪರಿಹಾರ ಹಾಗೂ ಅಂತ್ಯಸಂಸ್ಕಾರ ವೆಚ್ಚ:**

ಸಹಜ ಮರಣ ಹೊಂದಿದ ಫಲಾನುಭವಿಗಳ ಅವಲಂಬಿತರಿಗೆ ಅಂತ್ಯ ಸಂಸ್ಕಾರದ ವೆಚ್ಚವೂ ಸೇರಿದಂತೆ ರೂ.25,000/-ಗಳ ಪರಿಹಾರ.

**(ಇ) ಶೈಕ್ಷಣಿಕ ಧನಸಹಾಯ :**

**(i) ನೋಂದಾಯಿತ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**

- 12ನೇ ತರಗತಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.3,000/-

| | | |
|---|---|---|
| | | • ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.5,500/-<br>• ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.8,000/-<br>• ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.11,000/-<br><br>**(ii) ಅಪಘಾತದಿಂದ ನಿಧನರಾದ / ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**<br>• 1ನೇ ತರಗತಿಯಿಂದ ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.10,000/-<br>• ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.20,000/-<br>• ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.25,000/-<br><br>**(ಈ) ಹೆರಿಗೆ ಸಹಾಯ ಧನ:**<br>ಫಲಾನುಭವಿಯ ಮೊದಲ ಎರಡು ಹೆರಿಗೆಗಳಿಗೆ ಮಾತ್ರ ಸೀಮಿತಗೊಂಡಂತೆ ತಲಾ ರೂ.10,000/-ಗಳು.<br><br>**<u>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ:</u>**<br>ಈ ಮಂಡಳಿಯಿಂದ ಜಾರಿ ಮಾಡಲಾದ ಯೋಜನೆ ವಿವರಗಳು ಈ ಕೆಳಕಂಡತಿವೆ.<br><br>ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ವಂತಿಗೆ ಪಾವತಿಸುವ ವಿವಿಧ ಕ್ಷೇತ್ರಗಳಾದ ಕಾರ್ಖಾನೆಗಳು/ ಸಂಸ್ಥೆಗಳು/ ಪ್ಲಾಂಟೇಶನ್/ಸಾರಿಗೆ ಸಂಸ್ಥೆಗಳಲ್ಲಿ ದುಡಿಯುತ್ತಿರುವ ಸಂಘಟಿತ ವಲಯ ಕಾರ್ಮಿಕರು ಮತ್ತು ಅವರ ಕುಟುಂಬದ ಅವಲಂಬಿತರ ಕ್ಷೇಮಾಭಿವೃದ್ಧಿಗಾಗಿ ಈ ಕೆಳಕಂಡ ಕಲ್ಯಾಣ ಯೋಜನೆಗಳನ್ನು ನೀಡಲಾಗುತ್ತದೆ.<br><br>1) ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ<br>2) ಕಾರ್ಮಿಕರಿಗೆ ವೈದ್ಯಕೀಯ ನೆರವು<br>3) ಕಾರ್ಮಿಕರಿಗೆ ಅಪಘಾತ ಧನ ಸಹಾಯ<br>4) ಮಹಿಳಾ ಕಾರ್ಮಿಕರಿಗೆ ಹೆರಿಗೆ ಭತ್ಯೆ ಸೌಲಭ್ಯ<br>5) ಮೃತಕಾರ್ಮಿಕನ ಅಂತ್ಯ ಸಂಸ್ಕಾರಕ್ಕೆ ಧನ ಸಹಾಯ<br>6)ವಾರ್ಷಿಕ ವೈದ್ಯಕೀಯ ತಪಾಸಣೆ ಶಿಬಿರ ಹಮ್ಮಿಕೊಳ್ಳುವ ಟ್ರೇಡ್ ಯೂನಿಯನ್‌ಗಳಿಗೆ ಧನಸಹಾಯ<br>7)ವಾರ್ಷಿಕ ಕ್ರೀಡಾ ಕೂಟ ಹಮ್ಮಿಕೊಳ್ಳುವ ನೊಂದಾಯಿತ ಕಾರ್ಮಿಕ ಸಂಘಗಳಿಗೆ ಧನ ಸಹಾಯ. |

| | | |
|---|---|---|
| **ಆ)** | ಕಟ್ಟಡ ಕಾರ್ಮಿಕರಿಗಾಗಿ ವಿಶೇಷ ಯೋಜನೆಗಳಾವುವು: (ವಿವರ ನೀಡುವುದು) | ಕಟ್ಟಡ ಕಾರ್ಮಿಕರಿಗಾಗಿ ಇರುವ ವಿಶೇಷ ಯೋಜನೆಗಳ ವಿವರವನ್ನು ಉಪ ಪ್ರಶ್ನೆ **ಕ್ರ.ಸಂ. (ಅ)**ಗೆ ನೀಡಿರುವ ಉತ್ತರದಲ್ಲಿ ಒದಗಿಸಲಾಗಿದೆ. |
| **ಇ)** | ಕಾರ್ಮಿಕರಿಗೆ ವೈದ್ಯಕೀಯ ಸೌಲಭ್ಯ ನೀಡಲು ವಿಮೆ ಸೌಲಭ್ಯವಿದೆಯೇ ? ಕಳೆದ ಎರಡು ವರ್ಷಗಳಲ್ಲಿ ಎಷ್ಟು ಜನರಿಗೆ ಈ ಸೌಲಭ್ಯ ನೀಡಲಾಗಿದೆ: (ಜಿಲ್ಲಾವಾರು ಮಾಹಿತಿ ನೀಡುವುದು) | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳಲ್ಲಿ ಕಳೆದ ಎರಡು ವರ್ಷಗಳಲ್ಲಿ ವೈದ್ಯಕೀಯ ಸೌಲಭ್ಯ ನೀಡಲು ಕಾರ್ಮಿಕರಿಗೆ ನೀಡಲಾಗುತ್ತಿರುವ ಸೌಲಭ್ಯದ ಮಾಹಿತಿ ವಿವರ ಈ ಕೆಳಕಂಡಂತಿವೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ :</u>**<br>ಈ ಮಂಡಳಿಯಿಂದ ಯಾವುದೇ ವಿಮೆ ಸೌಲಭ್ಯವನ್ನು ನೋಂದಾಯಿತ ಫಲಾನುಭವಿಗಳಿಗೆ ರೂಪಿಸಿರುವುದಿಲ್ಲ. ಬದಲಾಗಿ ಪ್ರಸ್ತುತ ಈ ಕೆಳಕಂಡ ವೈದ್ಯಕೀಯ ಸಹಾಯ ಧನ ನೀಡಲಾಗುತ್ತಿದೆ.<br><br>1. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಬಿತರಿಗೆ **ರೂ. 300/-** ರಿಂದ **ರೂ. 20,000/-**ವರೆಗೆ.<br>2. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ**): ರೂ.2,00,000/- ಗಳ ವರೆಗೆ.<br><br>ಈ ಸೌಲಭ್ಯಗಳಡಿ ಕಳೆದ ಎರಡು ವರ್ಷಗಳಲ್ಲಿ ವಿತರಿಸಿರುವ ವೈದ್ಯಕೀಯ ವೆಚ್ಚದ ಜಿಲ್ಲಾವಾರು ವಿವರವನ್ನು **ಅನುಬಂಧ-2** ರಲ್ಲಿ ಒದಗಿಸಿದೆ.<br><br>ಮುಂದುವರೆದು, ಫಲಾನುಭವಿಗಳಿಗೆ ಚಿಕಿತ್ಸಾ ವೆಚ್ಚಕ್ಕೆ ಸಂಬಂಧಿಸಿದಂತೆ ಅನುಕೂಲವಾಗುವಂತೆ ಈ ಕೆಳಕಂಡ ಸೌಲಭ್ಯಗಳನ್ನು ವಿತರಿಸಲಾಗುತ್ತಿದೆ.<br><br>1. ನಿಯಮ 48 ರಲ್ಲಿ ಪ್ರಮುಖ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ನಿಗಧಿಪಡಿಸಿರುವ ಗರಿಷ್ಠ ರೂ.2.00 ಲಕ್ಷದ ಮಿತಿಯವರೆಗೆ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಬಿತರು ಸರ್ಕಾರದ ವೈದ್ಯಕೀಯ ಸಂಸ್ಥೆಗಳು, ಸರ್ಕಾರದ ವೈದ್ಯಕೀಯ ಕಾಲೇಜುಗಳಲ್ಲಿ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಬಿತರಿಗೆ ಸಿಜಿಹೆಚ್‌ಎಸ್ ದರಗಳನ್ವಯ ನಗದು ರಹಿತ ಚಿಕಿತ್ಸೆ ಪಡೆಯಲು ಅವಕಾಶ ಕಲ್ಪಿಸಲು ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ. |

| | | |
|---|---|---|
| | | 2. ಹೃದ್ರೋಗ ಮತ್ತು ಕ್ಯಾನ್ಸರ್ ಕಾಯಿಲೆಗಳಿಗೆ ನೋಂದಾಯಿತ ಫಲಾನುಭವಿಗಳು ಹಾಗೂ ಅವರ ಅವಲಂಬಿತರು ಚಿಕಿತ್ಸೆ ಪಡೆದಲ್ಲಿ, ಚಿಕಿತ್ಸೆ ಹಾಗೂ ಔಷಧಿಗಳ ವೆಚ್ಚವನ್ನು ಮರುಪಾವತಿ ಮೊತ್ತವನ್ನು ರೂ.5.00 ಲಕ್ಷಕ್ಕೆ ಹೆಚ್ಚಿಸಲು ನಿರ್ಣಯಿಸಲಾಗಿರುತ್ತದೆ<br><br>3. ನೋಂದಾಯಿತ ಫಲಾನುಭವಿಗಳು ರಸ್ತೆ ಹಾಗೂ ವಾಹನ ಅಪಘಾತಕ್ಕೆ ಒಳಗಾಗಿ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದಿದ್ದಲ್ಲಿ ಅಥವಾ ನಿರ್ಮಾಣ ಕಾಮಗಾರಿ ನಡೆಯುತ್ತಿರುವ ಸ್ಥಳಗಳಲ್ಲಿ ಅಪಘಾತ ಉಂಟಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಲ್ಲಿ ಉಂಟಾಗುವ ವೈದ್ಯಕೀಯ ವೆಚ್ಚವನ್ನು ಸಿಜಿಹೆಚ್ಎಸ್ ದರಗಳನ್ವಯ ಮಂಡಳಿಯ ಫಲಾನುಭವಿಗಳಿಗೆ ವೈದ್ಯಕೀಯ ಸಹಾಯ ಧನ ನೀಡಲಾಗುವುದು.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಜಾರಿಗೊಳಿಸುತ್ತಿರುವ ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ, ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ ಹಾಗೂ ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಗಳಡಿ ವೈದ್ಯಕೀಯ ಸೌಲಭ್ಯವು ಸೇರಿದಂತೆ ಅಪಘಾತ ಪರಿಹಾರ ಸೌಲಭ್ಯವನ್ನು ಒದಗಿಸಲಾಗುತ್ತಿದ್ದು, ಕಳೆದ ಎರಡು ವರ್ಷಗಳ ಜಿಲ್ಲಾವಾರು ವಿವರವನ್ನು **ಅನುಬಂಧ-3**ದಲ್ಲಿ ಒದಗಿಸಿದೆ. |
| **ಈ)** | ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಹಾಕಿಕೊಂಡಿರುವ ಕಾರ್ಯಕ್ರಮಗಳಾವುವು?<br>ಅಸಂಘಟಿತ ಕಾರ್ಮಿಕರಿಗೆ ಸಹಾಯ ಮಾಡಲು ಯಾವ ಯೋಜನೆಗಳಿವೆ? (ವಿವರ ನೀಡುವುದು). | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳು ಜಾರಿಗೊಳಿಸುತ್ತಿರುವ ಯೋಜನೆಗಳ ವಿವರವನ್ನು ಉಪ ಪ್ರಶ್ನೆ **ಕ್ರ.ಸಂ. (ಅ)** ಗೆ ನೀಡಿರುವ ಉತ್ತರದಲ್ಲಿ ಒದಗಿಸಲಾಗಿದೆ. |

**ಕಾಇ 100 ಎಲ್ ಇಟಿ 2025**

**(ಸಂತೋಷ್ ಎಸ್. ಲಾಡ್)**
**ಕಾರ್ಮಿಕ ಸಚಿವರು**

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: ಎಂ.ಜಿ. ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1004 ಕ್ಕೆ

# ಅನುಬಂಧ -1

## ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂಧ ಅನುಷ್ಠಾನಗೊಳಿಸುತ್ತಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ

1. ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ. 3,000/-
2. ಕುಟುಂಬ ಪಿಂಚಣಿ ಸೌಲಭ್ಯ: ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ ರೂ.1500/-
3. ದುರ್ಬಲತೆ ಪಿಂಚಣಿ: ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ ರೂ. 2,000/- ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ ರೂ. 2,00,000/- ದವರೆಗೆ ಅನುಗ್ರಹರಾಶಿ ಸಹಾಯಧನ.
4. ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ
6. ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/- ದವರೆಗೆ ಮುಂಗಡ ಸೌಲಭ್ಯ
7. ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್): ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ. 50,000/-
8. ಅಂತ್ಯಕ್ರಿಯೆ ವೆಚ್ಚ :ರೂ. 4,000/- ಹಾಗೂ ಅನುಗ್ರಹ ರಾಶಿ ರೂ. 71,000/-ಸಹಾಯಧನ
9. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 1 | 1 ರಿಂದ 5 ನೇ ತರಗತಿ | 1,800 |
| 2 | 6 ರಿಂದ 8 ನೇ ತರಗತಿ | 2,400 |
| 3 | 9 ಹಾಗೂ 10ನೇ ತರಗತಿ | 3,000 |
| 4 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 4,600 |
| 5 | ಪದವಿ | 10,000 |
| 6 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | 10,000 |
| 7 | ಸ್ನಾತಕೋತ್ತರ ಪದವಿ | 10,000 |
| 8 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 4,600 |
| 9 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ / ಅಕ್ಸುಲರಿ ನರ್ಸಿಂಗ್ ಆಂಡ್ ಮಿಡ್ವೈಫ್ | 10,000 |
| 10 | ಬಿ.ಎಡ್ | 6,000 |
| 11 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ ಎಸ್/ ಬಿಡಿಎಸ್ /ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | 11,000 |
| 12 | ಎಲ್‌ಎಲ್ ಬಿ/ಎಲ್ ಎಲ್ ಎಂ | 10,000 |

| ಕ್ರ ಸಂ | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 13 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | 10,000 |
| 14 | ಎಮ್‌ಡಿ ಮೆಡಿಕಲ್ | 12,000 |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | 11,000 |
| 16 | ಐಐಟಿ/ಐಐಐಟಿ/ ಐಐಎಮ್/ ಎನ್ಐಟಿ/ ಐಐಎಸ್‌ಇಆರ್/ಎಐಐಎಮ್‌ಎಸ್/ಎನ್ ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸುಗಳು. | 11,000 |

10. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/-**ವರೆಗೆ
11. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಮರಣ ಹೊಂದಿದ್ದಲ್ಲಿ **ರೂ. 5,00,000/-** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-**
12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):** ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತಚಿಕಿತ್ಸೆ, ಗರ್ಭಕೋಶ ಶಸ್ತಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ**
13. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-**
14. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: ಎಂ.ಜಿ. ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1004 ಕ್ಕೆ

# ಅನುಬಂಧ-2

ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೋಂದಾಯಿತ ಫಲಾನುಭವಿಗಳಿಗೆ ಕಳೆದ ಎರಡು ವರ್ಷದಲ್ಲಿ ವೈದ್ಯಕೀಯ ಸಹಾಯ ಧನ ವಿತರಿಸಿದ ಜಿಲ್ಲಾವಾರು ವಿವರ

| SL No | Districts | 2023-24 | | 2024-25 | | Total Beneficiaries | Total Amount |
|---|---|---|---|---|---|---|---|
| | | Beneficiaries | Amount | Beneficiaries | Amount | | |
| 1 | Bangalore Urban | 100 | 6477317 | 7 | 589243 | 107 | 7066560 |
| 2 | Bangalore Rural | 38 | 1578434 | 0 | 0 | 38 | 1578434 |
| 3 | Belagavi | 91 | 4174626 | 121 | 5925572 | 212 | 10100198 |
| 4 | Chikkamagaluru | 50 | 1515167 | 4 | 296060 | 54 | 1811227 |
| 5 | Davanagere | 103 | 4453275 | 24 | 394249 | 127 | 4847524 |
| 6 | Kalburgi | 9 | 466014 | 3 | 146539 | 12 | 612553 |
| 7 | Dharwad | 75 | 3575970 | 61 | 1654541 | 136 | 5230511 |
| 8 | Dakshina Kannada | 56 | 1310933 | 0 | 0 | 56 | 1310933 |
| 9 | Mysore | 83 | 2581136 | 0 | 0 | 83 | 2581136 |
| 10 | Bagalkot | 164 | 9597989 | 0 | 0 | 164 | 9597989 |
| 11 | Bellary/Vijayanagara | 77 | 3140543 | 10 | 307015 | 87 | 3447558 |
| 12 | Bidar | 74 | 4852000 | 2 | 93615 | 76 | 4945615 |
| 13 | Vijayapur | 45 | 1852921 | 54 | 1725234 | 99 | 3578155 |
| 14 | Chamarajanagar | 50 | 2176100 | 0 | 0 | 50 | 2176100 |
| 15 | Chikkaballapura | 47 | 3259035 | 0 | 0 | 47 | 3259035 |
| 16 | Chitradurga | 59 | 3001714 | 35 | 1555801 | 94 | 4557515 |
| 17 | Gadag | 3 | 263244 | 14 | 554684 | 17 | 817928 |

| | | | | | | | |
|---|---|---|---|---|---|---|---|
| 18 | Hassan | 226 | 13876166 | 22 | 1751299 | 248 | 15627465 |
| 19 | Haveri | 0 | 0 | 77 | 3153544 | 77 | 3153544 |
| 20 | Uttara Kannada | 189 | 5873518 | 32 | 913602 | 221 | 6787120 |
| 21 | Kolar | 140 | 7942225 | 2 | 343253 | 142 | 8285478 |
| 22 | Koppala | 108 | 2264816 | 23 | 666119 | 131 | 2930935 |
| 23 | Madikeri | 109 | 5266049 | 7 | 405798 | 116 | 5671847 |
| 24 | Mandya | 34 | 569913 | 0 | 0 | 34 | 569913 |
| 25 | Raichur | 258 | 8063902 | 105 | 3001505 | 363 | 11065407 |
| 26 | Ramanagara | 38 | 2045495 | 26 | 1247474 | 64 | 3292969 |
| 27 | Shimoga | 78 | 2594611 | 1 | 26745 | 79 | 2621356 |
| 28 | Tumkur | 82 | 2584163 | 24 | 172640 | 106 | 2756803 |
| 29 | Udupi | 155 | 6365125 | 1 | 30850 | 156 | 6395975 |
| 30 | Yadgir | 129 | 1489712 | 1 | 18630 | 130 | 1508342 |
| **Total** | | **2670** | **113212113** | **656** | **24974012** | **3326** | **138186125** |

ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಡಾ: ಎಂ.ಜಿ. ಮುಳೆ (ವಿಧಾನ ಸಭೆಯಿಂದ ಚುನಾಯಿತರಾದವರು) ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 1004 ಕ್ಕೆ

# ಅನುಬಂಧ-3

## ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ

(ಮೊತ್ತ ರೂ.ಗಳಲ್ಲಿ)

| ಕ್ರ. ಸಂ. | ಜಿಲ್ಲೆ | 2023-24 | | | | | | 2024-25 | | | | | |
|---|---|---|---|---|---|---|---|---|---|---|---|---|---|
| | | ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | | ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ | | ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ | | ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | | ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ | | ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ | |
| | | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ |
| 1 | ಬಾಗಲಕೋಟೆ | 11 | 55,00,000 | - | - | - | - | 5 | 25,00,000 | - | - | - | - |
| 2 | ಬೆಂಗಳೂರು | 31 | 1,37,49,038 | - | - | - | - | 32 | 1,60,00,000 | - | - | - | - |
| 3 | ಬೆಳಗಾವಿ | 7 | 35,00,000 | - | - | - | - | 7 | 35,00,000 | - | - | - | - |
| 4 | ಬಳ್ಳಾರಿ | 4 | 20,00,000 | - | - | - | - | 6 | 30,00,000 | - | - | - | - |
| 5 | ಬೀದರ್ | 12 | 60,00,000 | - | - | - | - | 9 | 35,00,000 | - | - | - | - |
| 6 | ವಿಜಯಪುರ | 3 | 15,00,000 | - | - | - | - | 9 | 51,60,000 | - | - | - | - |
| 7 | ಚಾಮರಾಜನಗರ | 0 | 0 | - | - | - | - | 4 | 20,00,000 | - | - | - | - |
| 8 | ಚಿಕ್ಕಮಗಳೂರು | 5 | 25,00,000 | - | - | - | - | 4 | 15,37,987 | - | - | - | - |
| 9 | ಚಿಕ್ಕಬಳ್ಳಾಪುರ | 5 | 25,00,000 | - | - | - | - | 7 | 35,00,000 | - | - | - | - |
| 10 | ಚಿತ್ರದುರ್ಗ | 7 | 35,00,000 | - | - | - | - | 4 | 20,00,000 | - | - | - | - |
| 11 | ದಕ್ಷಿಣ ಕನ್ನಡ | 14 | 70,00,000 | - | - | - | - | 10 | 50,00,000 | 01 | 1,00,000 | 01 | 4,00,000 |
| 12 | ದಾವಣಗೆರೆ | 1 | 50,000 | - | - | - | - | 2 | 10,00,000 | - | - | - | - |
| 13 | ಧಾರವಾಡ | 6 | 30,00,000 | - | - | - | - | 5 | 25,00,000 | - | - | - | - |
| 14 | ಗದಗ | 2 | 10,00,000 | - | - | - | - | 7 | 35,00,000 | - | - | - | - |

| | | | | | | | | | | | | | |
|---|---|---|---|---|---|---|---|---|---|---|---|---|---|
| 15 | ಗುಲ್ಬರ್ಗಾ | 6 | 16,09,602 | - | - | - | - | 3 | 15,00,000 | - | - | - | - |
| 16 | ಹಾಸನ | 15 | 75,00,000 | - | - | - | - | 4 | 20,00,000 | - | - | - | - |
| 17 | ಹಾವೇರಿ | 3 | 15,00,000 | - | - | - | - | 4 | 16,00,000 | - | - | - | - |
| 18 | ಕೊಡಗು | 2 | 10,00,000 | - | - | - | - | 2 | 10,00,000 | - | - | - | - |
| 19 | ಕೋಲಾರ | 4 | 20,00,000 | - | - | - | - | 5 | 25,00,000 | - | - | - | - |
| 20 | ಕೊಪ್ಪಳ | 4 | 20,00,000 | - | - | - | - | 1 | 5,00,000 | - | - | - | - |
| 21 | ಮಂಡ್ಯ | 10 | 45,50,000 | - | - | - | - | 7 | 26,98,880 | - | - | - | - |
| 22 | ಮೈಸೂರು | 4 | 20,00,000 | - | - | - | - | 8 | 35,21,510 | - | - | - | - |
| 23 | ರಾಯಚೂರು | 6 | 30,00,000 | - | - | - | - | 4 | 20,00,000 | - | - | - | - |
| 24 | ರಾಮನಗರ | 10 | 50,00,000 | - | - | - | - | 5 | 25,00,000 | - | - | - | - |
| 25 | ಶಿವಮೊಗ್ಗ | 7 | 35,00,000 | - | - | - | - | 5 | 25,00,000 | - | - | - | - |
| 26 | ತುಮಕೂರು | 11 | 55,00,000 | - | - | - | - | 10 | 45,13,865 | - | - | - | - |
| 27 | ಉಡುಪಿ | 5 | 25,00,000 | - | - | - | - | 4 | 11,00,000 | 01 | 23,929 | - | - |
| 28 | ಉತ್ತರಕನ್ನಡ | 2 | 10,00,000 | - | - | - | - | 4 | 20,00,000 | - | - | - | - |
| 29 | ಯಾದಗಿರಿ | 3 | 15,00,000 | - | - | - | - | 1 | 5,00,000 | - | - | - | - |
| 30 | ವಿಜಯನಗರ | 4 | 20,00,000 | - | - | - | - | 4 | 2000000 | - | - | - | - |
| | **ಒಟ್ಟು** | **204** | **97958640** | - | - | - | - | **182** | **87132242** | **02** | **123929** | **01** | **4,00,000** |